# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 906 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 27.12.2022 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಎಂ.ಎಸ್.ಎಂ.ಇ. ಹಾಗೂ ಕುಶಲಕರ್ಮಿಗಳಿಗೆ ಸಾಲ ಹಾಗೂ ಸಹಾಯಧನವನ್ನು ಬ್ಯಾಂಕ್‌ಗಳ ಮೂಲಕ ನೀಡಲು ಯೋಜಿಸಲಾಗಿದೆಯೇ; | I) ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಬ್ಯಾಂಕ್‌ಗಳ ಮೂಲಕ ವಿವಿಧ ಯೋಜನೆಗಳಡಿಯಲ್ಲಿ ಅವಧಿ ಸಾಲ ಮತ್ತು ದುಡಿಮೆ ಬಂಡವಾಳ ಸಾಲ ಪಡೆದು ಕೈಗಾರಿಕೆಗಳನ್ನು ಸ್ಥಾಪಿಸಬಹುದು.<br>1. ಕುಶಲಕರ್ಮಿಗಳಿಗೆ ಶೇ.4% ಬಡ್ಡಿ ದರದಲ್ಲಿ ಅವಧಿ ಸಾಲ (ಟರ್ಮ್ ಲೋನ್) ಮತ್ತು ದುಡಿಮೆ ಬಂಡವಾಳ ಸಾಲ.<br>2. ಕುಶಲಕರ್ಮಿಗಳ ಕರಕುಶಲ ವಸ್ತುಗಳ ವಹಿವಾಟಿನ ಮೇಲೆ ಶೇ.10% ರಷ್ಟು ಮಾರುಕಟ್ಟೆ ಅಭಿವೃದ್ಧಿ ನೆರವು (ಎಂ.ಡಿ.ಎ.)<br>3. ಕರಕುಶಲ ಸಂಘಟನೆಗಳಿಗೆ, ಕರಕುಶಲ ಕಾಂಪ್ಲೆಕ್ಸ್‌ಗಳಿಗೆ, ಸಮೂಹ ಮೊದಲಾದವುಗಳಿಗೆ ಯಂತ್ರೋಪಕರಣಗಳು, ಬಿಡಿ ಭಾಗಗಳಿಗೆ 75% ಅನುದಾನ.<br>ಕರ್ನಾಟಕ ಸರ್ಕಾರವು ಜಾರಿಗೆ ತಂದಿರುವ ಹೊಸ ಕೈಗಾರಿಕಾ ನೀತಿ 2020-25 ರನ್ವಯ ಈ ಕೆಳಗಿನ ಸಹಾಯಧನವನ್ನು ಪಡೆಯಲು ಅರ್ಹವಾಗಿರುತ್ತವೆ.<br>1. ಬಂಡವಾಳ ಹೂಡಿಕೆ ಸಹಾಯಧನ<br>2. ಮುದ್ರಾಂಕ ಶುಲ್ಕ ವಿನಾಯಿತಿ<br>3. ನೋಂದಣಿ ಶುಲ್ಕ ರಿಯಾಯಿತಿ ಪ್ರಮಾಣಪತ್ರ<br>4. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿ ಸಹಾಯಧನ.<br>ಅಲ್ಲದೆ ಸೂಕ್ಷ್ಮ ಕೈಗಾರಿಕೆಗಳ ಸ್ಥಾಪನೆಗೆ ನಿರುದ್ಯೋಗಿ ಯುವಕ ಯುವತಿಯರಿಗೆ ಸಾಲ ಮತ್ತು ಸಹಾಯಧನದ ಈ ಕೆಳಗಿನ ಯೋಜನೆಗಳನ್ನು ಸಹ ಅನುಷ್ಠಾನಗೊಳಿಸಲಾಗುತ್ತಿದೆ:<br>1. ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನೆ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ಪಾದನಾ ಘಟಕಗಳಿಗೆ ಗರಿಷ್ಟ ರೂ.50 ಲಕ್ಷಗಳವರೆಗೆ ಮತ್ತು ಸೇವಾ ಘಟಕಗಳಿಗೆ ಗರಿಷ್ಟ ರೂ.20 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ.15 ರಿಂದ ಶೇ.35 ರವರೆಗೆ ಗರಿಷ್ಟ ರೂ.7.50 ಲಕ್ಷದಿಂದ ರೂ.17.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ. |

| | | |
|---|---|---|
| | | 2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br>3. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ.60 ರಷ್ಟು ಗರಿಷ್ಟ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br><br>II) 76ನೇ ಸ್ವಾತಂತ್ರ್ಯೋತ್ಸವದ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಯವರು *"ಕರ್ನಾಟಕ ಕರಕುಶಲ ಅಭಿವೃದ್ಧಿ ನಿಗಮದಿಂದ ಕುಂಬಾರ, ಕಮ್ಮಾರ, ಬಡಗಿ, ಶಿಲ್ಪಿಗಳು, ಭಜಂತ್ರಿ, ಬುಟ್ಟಿ ಹೆಣೆಯುವವರು, ವಿಶ್ವಕರ್ಮರು, ಮಾದರು ಮತ್ತಿತರ ಕುಶಲ ಕರ್ಮಿಗಳಿಗೆ ತಲಾ 50 ಸಾವಿರ ರೂ.ಗಳವರೆಗೆ ಸಾಲ-ಸಹಾಯಧನ (Loan cum subsidy) ಯೋಜನೆಯನ್ನು ಜಾರಿಗೊಳಿಸಲಾಗುವುದು"* ಎಂದು ಘೋಷಿಸಿದ್ದು, ಈ ಹೊಸ ಯೋಜನೆಯ ಮಾನದಂಡ ಹಾಗೂ ಫಲಾನುಭವಿ ಕುಶಲಕರ್ಮಿಗಳ ಚಟುವಟಿಕೆ, ವೃತ್ತಿಯ ಪಟ್ಟಿ ಮತ್ತು ಈ ಹೊಸ ಯೋಜನೆಯ ರೂಪುರೇಷೆಯು ಸರ್ಕಾರದ ಪರಿಶೀಲನೆಯಲ್ಲಿ ಇದೆ. |
| ಆ) | ತಳಮಟ್ಟದ ಕುಶಲಕರ್ಮಿಗಳಿಗೆ ಸರ್ಕಾರದಿಂದ ನೆರವಿನ ಹಸ್ತ ನೀಡಲು ಸರ್ಕಾರವು ಯಾವ ಯಾವ ಕುಶಲಕರ್ಮಿಗಳನ್ನು ಗುರುತಿಸಲಾಗಿದೆ; ಇವುಗಳಿಗೆ ಇರುವ ಮಾನದಂಡನೆಗಳೇನು; (ವಿವರ ಒದಗಿಸುವುದು) | ಕುಶಲಕರ್ಮಿಗಳಿಗೆ ಸಾಲ-ಸಹಾಯಧನ (Loan-cum Subsidy) ಯೋಜನೆಯ ಮಾನದಂಡ ಹಾಗೂ ಫಲಾನುಭವಿ ಕುಶಲಕರ್ಮಿಗಳ ಚಟುವಟಿಕೆ, ವೃತ್ತಿಯ ಪಟ್ಟಿ ಮತ್ತು ಈ ಹೊಸ ಯೋಜನೆಯ ರೂಪುರೇಷೆಯು ಸರ್ಕಾರದ ಪರಿಶೀಲನೆಯಲ್ಲಿ ಇದೆ. |
| ಇ) | ಬ್ಯಾಂಕ್ ಹಾಗೂ ಸರ್ಕಾರಿ ಯೋಜನೆಗಳ ಬಗ್ಗೆ ಸರಿಯಾದ ಒಡಂಬಡಿಕೆ ಇಲ್ಲದೆ, ಹಲವಾರು ಕಾರ್ಯಕ್ರಮಗಳು ನೆಲಕಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ<br>ಎಂ.ಎಸ್.ಎಂ.ಇ. ಉದ್ಯಮಗಳಿಗೆ ಬ್ಯಾಂಕ್ ಹಾಗೂ ಸರ್ಕಾರದ ಯೋಜನೆಗಳ ಮತ್ತು ಕಾರ್ಯಕ್ರಮಗಳ ಬಗ್ಗೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ನಿರುದ್ಯೋಗಿ ಯುವಕ ಯುವತಿಯರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. |
| ಈ) | ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಅನ್ವಯಿಸುವುದಿಲ್ಲ |

ಸಿಐ 303 ಸಿಎಸ್ ಸಿ 2022

**(ಎನ್. ನಾಗರಾಜು (ಎಂ.ಟಿ.ಬಿ.))**
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ
ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು.